# ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ಸಿ-2/ಹು.ಮುಂ/47/2013-14

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರ, 18ನೇ ಕ್ರಾಸ್,
ಬೆಂಗಳೂರು-560012.
ದಿನಾಂಕ:1_-08-2014.

## ಜ್ಞಾಪನ

**ವಿಷಯ:-** ಪದವಿ ಪೂರ್ವ ಶಿಕ್ಷಣ ಇಲಾಖೆಯ ಬೋಧಕ-ಬೋಧಕೇತರ ಹುದ್ದೆಗಳನ್ನು ಮುಂದುವರೆಸುವ ಬಗ್ಗೆ.

**ಉಲ್ಲೇಖ:-**
1. ಸರ್ಕಾರದ ಆದೇಶ ಇಡಿ 86 ಯೋಯೋಕಾ 2013, ದಿನಾಂಕ:17-08-2013.
2. ಸರ್ಕಾರದ ಆದೇಶ ಸಂಖ್ಯೆ ಇಡಿ 103 ಯೋಯೋಕ 2014, ದಿನಾಂಕ:25-04-2014.
3. ಈ ಕಛೇರಿಯ ಸಮಸಂಖ್ಯೆಯ ಜ್ಞಾಪನ ದಿನಾಂಕ:26-04-2014.
4. ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 35 ಡಿಜಿಪಿ 2009, ದಿನಾಂಕ:15-05-2014.
5. ಸರ್ಕಾರದ ಪತ್ರ ಸಂಖ್ಯೆ ಇಡಿ 86 ಯೋಯೋಕ 2013, ದಿನಾಂಕ:11-08-2014.

-*-

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಬೋಧಕ-ಬೋಧಕೇತರ ಹುದ್ದೆಗಳನ್ನು ಮುಂದುವರೆಸುವ ಕುರಿತು ಉಲ್ಲೇಖ-1ರ ಸರ್ಕಾರದ ಆದೇಶದಲ್ಲಿ 2013-14ನೇ ಸಾಲಿಗೆ ಸಂಬಂಧಿಸಿದಂತೆ ಹುದ್ದೆಗಳನ್ನು ಮುಂದುವರೆಸಿ ಆದೇಶಿಸಲಾಗಿತ್ತು.

ಸರ್ಕಾರವು ಉಲ್ಲೇಖ-3ರಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪುನರಾವಲೋಕನೆ ಮಾಡಿ ಅಂತಿಮ ಅಧಿಸೂಚನೆಯನ್ನು ದಿನಾಂಕ: 29-05-2014ರ ಗೆಝೆಟ್‌ನಲ್ಲಿ ಪ್ರಕಟಿಸಿರುತ್ತದೆ. ಸದರಿ ಅಧಿಸೂಚನೆಯ ಮುಖಾಂತರ ಯೋಜನೇತರ ಹುದ್ದೆಗಳನ್ನು ಶಾಶ್ವತ ಹುದ್ದೆಗಳನ್ನಾಗಿ ಮತ್ತು ಯೋಜನೆ ಅಡಿ ಬರುವ ಹುದ್ದೆಗಳನ್ನು ತಾತ್ಕಾಲಿಕ ಹುದ್ದೆಗಳನ್ನಾಗಿ ಪ್ರಕಟಿಸಿ ಆದೇಶಿಸಿರುವುದನ್ನು ಉಲ್ಲೇಖ-5ರಲ್ಲಿ ಸರ್ಕಾರವು ಇಲಾಖೆಯ ಗಮನಕ್ಕೆ ತಂದಿರುತ್ತದೆ.

ಯೋಜನೆ ಅಡಿ ಬರುವ ಹುದ್ದೆಗಳಿಗೆ ಉಲ್ಲೇಖ-2ರ ಆದೇಶದಲ್ಲಿ ಸರ್ಕಾರವು ಮುಂದುವರಿಕೆ ಆದೇಶಗಳನ್ನು ಹೊರಡಿಸಿರುತ್ತದೆ. ಆದುದರಿಂದ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಯೋಜನೆ ಮತ್ತು ಯೋಜನೇತರ ಅಡಿ ಬರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯವರಿಗೆ ವೇತನ ಬಿಡುಗಡೆ ಮಾಡಲು ಈ ಮೂಲಕ ಸೂಚಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಗಳು:**
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು,
2. ರಾಜ್ಯ ಹುಜೂರ್ ಖಜಾನೆ, ಬೆಂಗಳೂರು,
3. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು ಮತ್ತು ತಾಲ್ಲೂಕು ಖಜಾನಾಧಿಕಾರಿಗಳು.
4. ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ,
5. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರುಗಳಿಗೆ
6. ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
7. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರದ ನಡವಳಿಗಳು

| | |
|---|---|
| ವಿಷಯ:- | 2014-15ನೇ ಸಾಲಿನ ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ವೃತ್ತಿ ಶಿಕ್ಷಣ ಇಲಾಖೆಗೆ ಯೋಜನಾ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ. |
| ಓದಲಾಗಿದೆ:- | 1. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ ಪಪೂಶಿ/ಲೆಪ-03/ತ್ರೈ.ಅನು/2014-15, ದಿನಾಂಕ: 10.07.2014.<br>2. ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂ:ಲೆಪವಿ:ಬಿ1:ಯೋಜನೆ:ಅನು:ಬಿಡು:01/2014-15, ದಿ: 24.07.2014.<br>3. ಸರ್ಕಾರದ ಆದೇಶ ಸಂಖ್ಯೆ ಇಡಿ 103 ಯೋಯೋಕ 2014, ದಿನಾಂಕ: 10-07-2014. |

*****

**ಪ್ರಸ್ತಾವನೆ**

ಮೇಲೆ ಓದಲಾದ ಕ್ರಮಾಂಕ (1)ರ ಪತ್ರದಲ್ಲಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ 2014-15ನೇ ಸಾಲಿನಲ್ಲಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಯೋಜನಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಎರಡನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯಕ್ಕೆ ಬೆಂಗಳೂರು ಇವರ 2014-15ನೇ ಸಾಲಿನಲ್ಲಿ ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯಕ್ಕೆ ಯೋಜನಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಎರಡನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3)ರ ಸರ್ಕಾರದ ಆದೇಶದಲ್ಲಿ 2014-15ನೇ ಸಾಲಿನ ಶಿಕ್ಷಣ ಇಲಾಖೆಯ ಶಿಕ್ಷಣ ವಲಯದಡಿ ಬರುವ ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ವೃತ್ತಿ ಶಿಕ್ಷಣ ನಿರ್ದೇಶನಾಲಯಕ್ಕೆ ಯೋಜನಾ ಕಾರ್ಯಕ್ರಮಗಳಡಿಯಲ್ಲಿ ಮುಂದುವರಿಕೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದ್ದು, ಮೊದಲನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡಲಾಗಿದೆ.

ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯ ಇವರ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 103 ಯೋಯೋಕ 2014, ಬೆಂಗಳೂರು, ದಿನಾಂಕ: 06-08-2014**

2014-15ನೇ ಸಾಲಿಗೆ ಶಿಕ್ಷಣ ಇಲಾಖೆಯ [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ] ಶಿಕ್ಷಣ ವಲಯದಡಿ ಬರುವ **ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ವೃತ್ತಿ ಶಿಕ್ಷಣ ನಿರ್ದೇಶನಾಲಯಕ್ಕೆ** (ರಾಜ್ಯ ವಲಯ ಯೋಜನೆಗಳು) ಸಂಬಂಧಿಸಿದಂತೆ, ಹೊಸ ಆಯವ್ಯಯದಲ್ಲಿನ ಯೋಜನಾ ಕಾರ್ಯಕ್ರಮಗಳಡಿಯಲ್ಲಿಯ ಮುಂದುವರಿಕೆ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅನುಬಂಧದಲ್ಲಿ ಲಗತ್ತಿಸಿರುವಂತೆ ಎರಡನೇ ತ್ರೈಮಾಸಿಕ

ಅನುದಾನವನ್ನು ಬಿಡುಗಡೆ ಮಾಡಲು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು, ವೃತ್ತಿ ಶಿಕ್ಷಣ ಇಲಾಖೆ ಇವರಿಗೆ ಅನುಮತಿ ನೀಡಿದೆ.

ಎಸ್.ಸಿ.ಪಿ/ಟಿ.ಎಸ್.ಪಿ. ಯಡಿ ಬಿಡುಗಡೆ ಮಾಡಿರುವ ಅನುದಾನವನ್ನು ಕ್ರಿಯಾಯೋಜನೆಗೆ ಅನುಮೋದನೆ ದೊರತ ನಂತರವೇ ಬಿಡುಗಡೆ ಮಾಡತಕ್ಕದ್ದು.

ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ ಇಡಿ 103 ಯೋಯೋಕ 2014, ದಿನಾಂಕ: 25-04-2014ರಲ್ಲಿ ವಿಧಿಸಲಾದ ಷರತ್ತು ಮತ್ತು ನಿಬಂಧನೆಗಳನ್ನು ಯಥಾವತ್ತಾಗಿ ಅನ್ವಯಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 03 ಬಿಪಿಇ 2014, ದಿನಾಂಕ: 07-03-2014ರ ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಐ.ಎಫ್. ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ(ಯೋಜನೆ)

ಇವರಿಗೆ :

1. ಮಹಾಲೇಖಪಾಲಕರು, ಕರ್ನಾಟಕ (ಆಡಿಟ್ 1 & 2) ಬೆಂಗಳೂರು.
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ವೃತ್ತಿ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು,ಖಜಾನೆಗಳ ಇಲಾಖೆ, ಬೆಂಗಳೂರು.
5. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಉಪನಿರ್ದೇಶಕರು, ನೆಟ್‌ವರ್ಕ ಮ್ಯಾನೇಜ್‌ಮೆಂಟ್, ಗಣಕಕೇಂದ್ರ, ನಂ.49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಯೋಜನೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಕೋ ಆರ್ಡಿನೇಟರ್, ಮಾಹಿತಿ ಕೇಂದ್ರ ಶಿಕ್ಷಣ ಇಲಾಖೆ, ಬೆಂಗಳೂರು.
10. ಸಾಪ್ತಾಹಿಕ ರಾಜ್ಯ ಪತ್ರ/ ಶಾಖಾ ರಕ್ಷಾ ಕಡತ

<u>ಪ್ರತಿ ಮಾಹಿತಿಗಾಗಿ</u>

1. ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
2. ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕ, ಶಿಕ್ಷಣ ಇಲಾಖೆ, ಬೆಂಗಳೂರು.

ಸರ್ಕಾರದ ಆದೇಶ ಸಂಖ್ಯೆ ಇಡಿ : 103 : ಯೋಯೋಕ 2014, ದಿನಾಂಕ:- 06-08-2014 ಕ್ಕೆ ಅನುಬಂಧ-2

ಪದವಿ ಪೂರ್ವ ಶಿಕ್ಷಣ ಮತ್ತು ವೃತ್ತಿ ಶಿಕ್ಷಣ ಇಲಾಖೆ:-

[ರೂ.ಲಕ್ಷಗಳಲ್ಲಿ]

| ಕ್ರ.ಸಂ | ಕಾರ್ಯಕ್ರಮದ ವಿವರ | ಲೆಕ್ಕಶೀರ್ಷಿಕೆ | 2014-15ನೇ ಸಾಲಿಗೆ ಒದಗಿಸಿರುವ ಅನುದಾನ | ಮೊದಲನೇ ಕಂತಾಗಿ ಬಿಡುಗಡೆ ಮಾಡಿರುವ ಅನುದಾನ | ಎರಡನೇ ಕಂತಾಗಿ ಬಿಡುಗಡೆ ಮಾಡುತ್ತಿರುವ ಅನುದಾನ |
|---|---|---|---|---|---|
| 1 | ನಿರ್ದೇಶನ ಮತ್ತು ಆಡಳಿತ | 2202-02-001-0-01-002, 003, 011, 014, 053, 020 | 150.00 | 37.50 | 37.50 |
| 2 | ಪದವಿ ಪೂರ್ವ ಶಿಕ್ಷಣ (ಪರೀಕ್ಷೆ ಬಾಬ್ತು) ಶೈಕ್ಷಣಿಕ ಸುಧಾರಣೆ | 2202-02-108-0-01-059 | 471.99 | 117.99 | 117.99 |
| | | 2202-02-108-0-01-422 | 78.00 | 0.00 | 39.00 |
| | | 2202-02-108-0-01-423 | 50.01 | 0.00 | 25.01 |
| 3 | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪೂರ್ವಭಾವಿ ಸೌಲಭ್ಯಗಳು ಕಲ್ಪಿಸುವಿಕೆ | 2202-02-109-0-06-125 | 194.04 | 0.00 | *97.02 |
| | | 2202-02-109-0-06-422 | 83.63 | 0.00 | 41.82 |
| | | 2202-02-109-0-06-423 | 49.00 | 0.00 | 24.50 |
| 4 | ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಿಬ್ಬಂದಿಗಳ ವೇತನ | [2202-02-109-0-13 | 34063.36 | 8515.84 | 17031.68 |
| | | [2202-02-109-0-13-422 | 150.00 | 0.00 | 75.00 |
| | | [2202-02-109-0-13-423 | 50.00 | 0.00 | 25.00 |
| 5 | ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಿಬ್ಬಂದಿ ವೇತನ | 2202-02-110-3-01-101 | 7000.00 | 1750.00 | 3500.00 |
| 6 | ಸರ್ಕಾರಿ ಪದವಿಪೂರ್ವ ಕಾಲೇಜುಗಳ ಕಟ್ಟಡ ನಿರ್ಮಾಣಕ್ಕಾಗಿ | 4202-01-203-1-07-437 | 978.65 | 0.00 | 0.00 |
| | | 4202-01-203-1-07-438 | 489.44 | 0,00 | 0.00 |
| | | 4202-01-203-1-07-436 | 831.91 | 0.00 | 0.00 |
| 7 | ಸರ್ಕಾರಿ ಪದವಿ ಪೂರ್ವಕಾಲೇಜುಗಳಲ್ಲಿ ಗಣಕ ಶಿಕ್ಷಣದ ಸಾಕ್ಷರತೆ | [2202-80-003--0-05-059 | 1500.00 | 375.00 | 375.00 |
| 8 | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರ ಸರ್ಕಾರೇತರ ಶುಲ್ಕ ಮರುಪಾವತಿ | 2202-02-107-3-02-101 | 490.60 | 122.65 | 122.65 |
| | | 2202-02-107-3-02-422 | 122.75 | 0.00 | 61.38 |
| | | 2202-02-107-3-02-423 | 73.65 | 0.00 | 36.83 |
| ವೃತ್ತಿ ಶಿಕ್ಷಣ ಇಲಾಖೆ:- | | | | | |
| 1 | ಸೆಕೆಂಡರಿ ಶಿಕ್ಷಣದ ವೃತ್ತೀಕರಣ | 220-02-02-109-0-17-051 | 521.66 | 121.66 | 391.24 |
| | | 220-02-02-109-0-17-059 | 100.00 | 100.00 | 0.00 |
| | | 220-02-02-109-0-17-422 | 98.58 | 0.00 | 0.00 |
| | | 220-02-02-109-0-17-423 | 45.83 | 0.00 | 0.00 |

* ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ಪಡೆಯತಕ್ಕದ್ದು

(ಐ.ಎಫ್. ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಯೋಜನೆ).

# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 86-ಯೋಯೋಕ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು,ದಿನಾಂಕ: 11.08.2014

ಇವರಿಂದ:-

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಶಿಕ್ಷಣ ಇಲಾಖೆ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ)
ಬಹುಮಹಡಿ ಕಟ್ಟಡ,
ಬೆಂಗಳೂರು- 560 001.

ಇವರಿಗೆ:-

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಬೆಂಗಳೂರು.

ಮಾನ್ಯರೆ,

**ವಿಷಯ :** ಸರ್ಕಾರಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಬೋಧಕ-ಬೋಧಕೇತರ ಹುದ್ದೆಗಳನ್ನು ಮುಂದುವರೆಸುವ ಬಗ್ಗೆ.

**ಉಲ್ಲೇಖ :** ತಮ್ಮ ಪತ್ರ ಸಂಖ್ಯೆ ಪಪೂಶಿಇ/ಸಿ-2/ಹ.ಮುಂ/47/2013-14, ದಿನಾಂಕ: 06.08.2014.

--------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಬೋಧಕ-ಬೋಧಕೇತರ ಹುದ್ದೆಗಳನ್ನು ಮುಂದುವರೆಸುವ ಸಂಬಂಧ, ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಯೋಜನೇತರಡಿಯಲ್ಲಿ ಬರುವ ಎಲ್ಲಾ ಹುದ್ದೆಗಳು ಶಾಶ್ವತ ಹುದ್ದೆಗಳೆಂದು ಯೋಜನೆಯಡಿ ಬರುವ ಹುದ್ದೆಗಳನ್ನು ತಾತ್ಕಾಲಿಕ ಹುದ್ದೆಗಳೆಂದು ಸ್ಪಷ್ಟೀಕರಿಸಿ ಅಂತಿಮ ಅಧಿಸೂಚನೆಯನ್ನು ದಿನಾಂಕ: 29-05-2014ರ ಗೆಜೆಟ್‌ನಲ್ಲಿ ಪ್ರಕಟಿಸಿರುವುದರಿಂದ, ಸದರಿ ಹುದ್ದೆಗಳ ಮುಂದುವರಿಕೆಗೆ ಪ್ರತ್ಯೇಕವಾದ ಆದೇಶದ ಅವಶ್ಯಕಗೆಯಿಲ್ಲವೆಂದು ತಮಗೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

11/8/2014.

ತಮ್ಮ ನಂಬುಗೆಯ,

( ಐ.ಎಫ್. ಮಾಗಿ )
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ. (ಯೋಜನೆ)